ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103☏:0816-2255650, 2273511,ಫ್ಯಾಕ್ಸ್ :0816-2270719

ಸಂಖ್ಯೆ:ತುವಿ: ಪ.ವಿ:ವಿ.ನಿ.-09:2019-20: ದಿನಾಂಕ: 28.08.2019

## ಅಧಿಸೂಚನೆ

**ವಿಷಯ:** ಸ್ನಾತಕೋತ್ತರ ಪದವಿಯ ದ್ವಿತೀಯ ಮತ್ತು ನಾಲ್ಕನೇ ಸೆಮಿಸ್ಟರ್ ಪರೀಕ್ಷೆಗಳ (CBCS) ಉತ್ತರ ಪತ್ರಿಕೆಗಳ ಚಾಲೆಂಜ್ ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವ ಕುರಿತು.

**ಉಲ್ಲೇಖ:** ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ: 19.08.2019

* * * * *

2019 ರ ಜೂನ್/ಜುಲೈ ಮಾಹೆಗಳಲ್ಲಿ ನಡೆದ ವಿವಿಧ ಸ್ನಾತಕೋತ್ತರ ಪದವಿಯ ದ್ವಿತೀಯ ಮತ್ತು ನಾಲ್ಕನೇ ಸೆಮಿಸ್ಟರ್ (CBCS) ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಈಗಾಗಲೇ ಫಲಿತಾಂಶ ಪ್ರಕಟಿಸಿದ ಎಲ್ಲಾ ವಿಷಯಗಳ ಉತ್ತರ ಪತ್ರಿಕೆಗಳ ಚಾಲೆಂಜ್ ಮೌಲ್ಯಮಾಪನಕ್ಕೆ ಅವಕಾಶ ಕಲ್ಪಿಸಲಾಗಿದ್ದು, ಉತ್ತರ ಪತ್ರಿಕೆಗಳ ಚಾಲೆಂಜ್ ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಇಚ್ಛಿಸುವ ವಿದ್ಯಾರ್ಥಿಗಳು ಅಯಾ ವಿಭಾಗಗಳಲ್ಲಿ/ಕಾಲೇಜುಗಳಲ್ಲಿ ವಿಭಾಗದ ಮುಖ್ಯಸ್ಥರು/ಪ್ರಾಂಶುಪಾಲರ ಮುಖಾಂತರ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸುವುದು ಮತ್ತು ವಿಭಾಗ/ ಕಾಲೇಜಿನವರು ಸದರಿ ಮಾಹಿತಿಯನ್ನು ಈ ಕೆಳಗೆ ನೀಡಿದ ದಿನಾಂಕದೊಳಗೆ **ಕುಲಸಚಿವರು(ಪರೀಕ್ಷಾಂಗ),ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.** ಇವರಿಗೆ ಸಲ್ಲಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ.

| | |
|---|---|
| ಚಾಲೆಂಜ್ ಮೌಲ್ಯಮಾಪನದ ಶುಲ್ಕ ಪ್ರತಿ ವಿಷಯಕ್ಕೆ (Per Paper) | ರೂ.1,310-00 |
| ವಿದ್ಯಾರ್ಥಿಗಳು ಚಾಲೆಂಜ್ ಮೌಲ್ಯಮಾಪನಕ್ಕೆ ಕಾಲೇಜು/ವಿಭಾಗದಲ್ಲಿ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ | 03.09.2019 |
| ವಿಭಾಗ/ಕಾಲೇಜಿನವರು ಆನ್‌ಲೈನ್‌ನಲ್ಲಿ ನಮೂದಿಸಲು ಕೊನೆಯ ದಿನಾಂಕ | 05.09.2019 |
| ಚಾಲೆಂಜ್ ಮೌಲ್ಯಮಾಪನಕ್ಕೆ ಸಲ್ಲಿಸಿದ ಅರ್ಜಿಗಳ ವಿವರಗಳನ್ನು ವಿಭಾಗ/ಕಾಲೇಜಿನವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕಡೆಯ ದಿನಾಂಕ | 07.09.2019 |

**ವಿಶೇಷ ಸೂಚನೆ:-** 1). ಚಾಲೆಂಜ್ ಮೌಲ್ಯಮಾಪನದಲ್ಲಿ ಪಡೆದ ಅಂಕಗಳೇ ಅಂತಿಮವಾಗಿರುತ್ತದೆ. ಕಡೆಯ ದಿನಾಂಕದ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.

2) ಈಗಾಗಲೇ ತಾತ್ಕಾಲಿಕ ಪದವಿ ಪ್ರಮಾಣ ಪತ್ರ ಪಡೆದ ವಿದ್ಯಾರ್ಥಿಗಳು ಚಾಲೆಂಜ್ ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ ಆದಾಗ್ಯೂ ಚಾಲೆಂಜ್ ಮೌಲ್ಯಮಾಪನಕ್ಕಾಗಿ ವಿದ್ಯಾರ್ಥಿಗಳು ಶುಲ್ಕ ಪಾವತಿಸಿದರೆ ಸದರಿ ವಿದ್ಯಾರ್ಥಿಯ ಉತ್ತರ ಪತ್ರಿಕೆಯನ್ನು ಚಾಲೆಂಜ್ ಮೌಲ್ಯಮಾಪನಕ್ಕೆ ಪರಿಗಣಿಸುವುದಿಲ್ಲ.

ಆದೇಶದ ಮೇರೆಗೆ,

ಕುಲಸಚಿವ(ಪರೀಕ್ಷಾಂಗ)

ಗೆ,

ನಿರ್ದೇಶಕರು / ಮುಖ್ಯಸ್ಥರು/ಸಂಯೋಜಕರು/ಪ್ರಾಂಶುಪಾಲರು/ ವಿವಿಧ ಸ್ನಾತಕೋತ್ತರ ವಿಭಾಗಗಳು ಮತ್ತು ವಿವಿಧ ಸ್ನಾತಕೋತ್ತರ ಸಂಯೋಜಿತ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಆಪ್ತ ಸಹಾಯಕರು, ಕುಲಸಚಿವ (ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಕಛೇರಿ ಪ್ರತಿ.